XVII. ಶ್ರೀ ಎಸ್. ನಂಜಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಮಂತ್ರಿ) ಮಾನ್ಯ ಅಧ್ಯಕ್ಷರೆ, 1956ರ ಕಂಪನಿಗಳ ಕಾಯ್ದೆಯ 619ರ ಕಲಮಿನ ಮೇರೆಗೆ;

1987–88ನೇ ಸಾಲಿನ ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತದ 15ನೇ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

XVIII. ಶ್ರೀ ಬಿ.ಎನ್. ಬಚ್ಚೇಗೌಡ (ಪಶು ಸಂಗೋಪನೆ ರಾಜ್ಯ ಮಂತ್ರಿ) ಮಾನ್ಯ ಅಧ್ಯಕ್ಷರೆ, **1956ರ ಕಂಪನಿಗಳ ಕಾಯ್ದೆಯ 619ಎ ಕಲಮಿನ ಮೇರೆಗೆ;**

ಕರ್ನಾಟಕ ಮಾಂಸ ಮತ್ತು ಕೋಳಿ ಮಾರಾಟ ನಿಗಮ ನಿಯಮಿತದ 19ನೇ ವಾರ್ಷಿಕ ವರದಿ ಮತ್ತು 31.3.1993ರ ಲೆಕ್ಕ ಪತ್ರಗಳನ್ನು ಮಂಡಿಸುತ್ತೇನೆ.

XIX. ಶ್ರೀ ಎಂ.ಸಿ. ನಾಣಯ್ಯ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) ಮಾನ್ಯ ಅಧ್ಯಕ್ಷರೆ, ವಸತಿ ರಾಜ್ಯ ಮಂತ್ರಿಗಳ ಪರವಾಗಿ

1962ರ ಕರ್ನಾಟಕ ಗೃಹ ಮಂಡಳಿ ಅಧಿನಿಯಮದ 55(3)ನೇ ಕಲಮಿನ ಮೇರೆಗೆ;

1987–88ನೇ ಸಾಲಿನ ಕರ್ನಾಟಕ ಗೃಹ ಮಂಡಳಿಯ ವಾರ್ಷಿಕ ಲೆಕ್ಕಪತ್ರ ತಪಾಸಣಾ ವರದಿಯನ್ನು ಮಂಡಿಸುತ್ತೇನೆ:

XX. ಶ್ರೀ ಶಿವಾನಂದ ಹೆಚ್. ಕೌಜಲಗಿ (ಲೋಕೋಪಯೋಗಿ ಸಚಿವರು) ಮಾನ್ಯ ಅಧ್ಯಕ್ಷರೆ, ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಮಂತ್ರಿಯವರ ಪರವಾಗಿ

1956ರ ಕಂಪನಿಗಳ ಕಾಯ್ದೆಯ 619ಎ ಕಲಮಿನ ಮೇರೆಗೆ;

1992–93ನೇ ಸಾಲಿನ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ನಿಯಮಿತದ 6ನೇ ವಾರ್ಷಿಕ ವರದಿ ಮತ್ತು ಲೆಕ್ಕ ಪತ್ರಗಳನ್ನು (ವಿಳಂಬಕ್ಕೆ ಕಾರಣಗಳೊಂದಿಗೆ) ಮಂಡಿಸುತ್ತೇನೆ.

ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿ:– ಮಾನ್ಯ ಅಧ್ಯಕ್ಷರೇ, 9ನೇ ವಿಧಾನಸಭೆಯ ಈ ಕೆಳಕಂಡ ಸಮಿತಿಗಳ ವರದಿಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

1. ಸಾರ್ವಜನಿಕ ಉದ್ದಿಮೆಗಳ ಸಮಿತಿಯ 62, 63, 64 ಹಾಗೂ 65ನೇ ವರದಿಗಳು.

2. 1994–95ನೇ ಸಾಲಿನ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮೇಲಿನ ವಿಷಯ ಸಮಿತಿಯ 2ನೇ ವರದಿ.

ಕೃಷ್ಣ ಮತ್ತು ಕಾವೇರಿ ಯೋಜನೆಗಳ ಬಗ್ಗೆ ಸರ್ಕಾರದ ನಿಲುವು

† ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ಅಧ್ಯಕ್ಷರೇ, ನಾನು ತಮ್ಮ ಕೊಠಡಿಗೆ ಬಂದು ತಮ್ಮ ಅಪ್ಪಣೆಯನ್ನು ಪಡೆದು ಒಂದು ವಿಚಾರವನ್ನು ತಮ್ಮ ಗಮನಕ್ಕೆ ತರಬೇಕೆಂದು ಹೇಳಿದ್ದೇನೆ.

ಅಧ್ಯಕ್ಷರು: ತಾವುಗಳು ತಮ್ಮ ನಿಲುವಳಿ ಸೂಚನೆಯ ಬಗ್ಗೆ ಪ್ರಸ್ತಾಪ ಮಾಡುವುದಕ್ಕೆ ಹೊರಟಿದ್ದೀರಿ. ಶೂನ್ಯವೇಳೆಯಲ್ಲಿ ಅವರು ಎರಡು ವಿಷಯಗಳನ್ನು ಹೇಳಿದ್ದಾರೆ. ಅದು ಆದ ನಂತರ ತಮ್ಮ ನಿಲುವಳಿ ಸೂಚನೆಯನ್ನು ತೆಗೆದುಕೊಳ್ಳಲು ಅವಕಾಶ ಕೊಡುತ್ತೇನೆ.

ಶ್ರೀ ವಾಟಾಳ್ ನಾಗರಾಜ್: ಮಾನ್ಯ ಅಧ್ಯಕ್ಷರೇ, ಹೊಸ ಸರಕಾರವು ಅಧಿಕಾರಕ್ಕೆ ಬಂದಮೇಲೆ